## ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 945

2) ಮಾನ್ಯ ಸದಸ್ಯರ ಹೆಸರು : ಡಾ:ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

3) ಉತ್ತರಿಸುವ ದಿನಾಂಕ : 22.02.2024

4) ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಉತ್ತರ ತಾಲ್ಲೂಕಿನ ಹೆಬ್ಬಾಳ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹೆಬ್ಬಾಳ ಪೊಲೀಸ್ ಠಾಣೆ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಈ ಠಾಣೆಯು ಹಳೆಯ ಕಟ್ಟಡವಾಗಿರುವುದರಿಂದ ತಾತ್ಕಾಲಿಕವಾಗಿ ದುರಸ್ಥಿ ಕಾರ್ಯಮಾಡಿಸಿಕೊಂಡು ಕಾರ್ಯನಿರ್ವಹಣೆ ಮಾಡಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಈ ಠಾಣೆಗೆ ಹೊಸ ಕಟ್ಟಡ ನಿರ್ಮಾಣ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; | ಹೆಬ್ಬಾಳ ಪೊಲೀಸ್ ಠಾಣಾ ಕಟ್ಟಡ ನಿರ್ಮಾಣಕ್ಕಾಗಿ ಸೂಕ್ತ ಸ್ಥಳ ದೊರತಿರುವುದಿಲ್ಲ. |
| ಇ | ಈ ಠಾಣೆಯು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಹೋಗುವ ರಸ್ತೆಯಲ್ಲಿರುವುದರಿಂದ ಸರ್ಕಾರ ಕೂಡಲೇ ಹೊಸ ಕಟ್ಟಡ ನಿರ್ಮಾಣ ಮಾಡಲು ಯಾವ ಕ್ರಮಕೈಗೊಳ್ಳುವುದು? | ಹೆಬ್ಬಾಳ ಪೊಲೀಸ್ ಠಾಣೆಗೆ ಸ್ಥಳವನ್ನು ಗುರುತಿಸಲು ಪ್ರಯತ್ನಿಸಲಾಗುತ್ತಿದೆ. ಸೂಕ್ತ ಜಾಗ ದೊರೆತ ನಂತರ ಹೆಬ್ಬಾಳ ಪೊಲೀಸ್ ಠಾಣೆಯ ಕಟ್ಟಡ ನಿರ್ಮಾಣ ಮಾಡಲು ಅನುದಾನ ಲಭ್ಯತೆಯ ಮೇಲೆ ಪರಿಶೀಲಿಸಲಾಗುವುದು.<br><br>ಪ್ರಸ್ತುತ ಹೆಬ್ಬಾಳ ಪೊಲೀಸ್ ಠಾಣಾ ಕಟ್ಟಡವು ಶಿಥಿಲಗೊಂಡಿರುವುದರಿಂದ ಠಾಣೆಗೆ ಬರುವ ಸಾರ್ವಜನಿಕರಿಗೆ ಸ್ಥಳಾವಕಾಶದ ಕೊರತೆ ಇರುವುದರಿಂದ ಬಳ್ಳಾರಿ ರಸ್ತೆಗೆ ಹೊಂದಿಕೊಂಡಿರುವ ಪಶುಸಂಗೋಪನ ಇಲಾಖೆಯ ಎಂ.ಆರ್.ಎಸ್ ಕಟ್ಟಡಕ್ಕೆ ಬಾಡಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಪೊಲೀಸ್ ಠಾಣೆಯನ್ನು ಸ್ಥಳಾಂತರಿಸಲು ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ: ಹೆಚ್‌ಡಿ 25 ಪಿಬಿಎಲ್ 2024**

(ಡಾ|| ಜಿ. ಪರಮೇಶ್ವರ)
ಗೃಹ ಸಚಿವರು